## ಕರ್ನಾಟಕ ವಿಧಾನ ಪರಿಷತ್ತು

1. ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಡಾ. ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ)
2. ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 22 (197)
3. ಉತ್ತರಿಸ ಬೇಕಾದ ದಿನಾಂಕ : 10.12.2024
4. ಉತ್ತರಿಸ ಬೇಕಾದ ಸಚಿವರು : ಮಾನ್ಯ ಅರಣ್ಯ ಜೀವಿಪರಿಸ್ಥಿತಿ ಮತ್ತು ಪರಿಸರ ಸಚಿವರು

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ಕೈಗಾರಿಕೆಗಳು ವಿವಿಧ ರೀತಿಯ ತ್ಯಾಜ್ಯಗಳನ್ನು ವಿಲೇವಾರಿ ಮಾಡಲು ಅನುಸರಿಸಬೇಕಾದ ಮಾನದಂಡಗಳೇನು: | ಕೈಗಾರಿಕೆಗಳಿಂದ ಉತ್ಪತ್ತಿಯಾಗುವ ವಿವಿಧ ರೀತಿಯ ತ್ಯಾಜ್ಯಗಳನ್ನು ವಿಲೇವಾರಿ ಮಾಡಲು ಕೆಳಕಂಡಂತೆ ಮಾನದಂಡಗಳನ್ನು ನಿಗಧಿಪಡಿಸಲಾಗಿದೆ.<br><br>ಅ) ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ಕೈಗಾರಿಕೆಗಳಿಗೆ ಷರತ್ತುಬದ್ಧ ಸಮ್ಮತಿ ಪತ್ರಗಳನ್ನು ನೀಡುತ್ತದೆ. ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಷರತ್ತುಗಳ ಅನ್ವಯ ತ್ಯಾಜ್ಯ ನೀರನ್ನು ಮಂಡಳಿಯು ನಿಗದಿಪಡಿಸಿರುವ ಮಾನದಂಡಗಳಿಗೆ ಕೈಗಾರಿಕೆಯಲ್ಲಿ ಸ್ಥಾಪಿತವಾಗಿರುವ ಶುದ್ಧಿಕರಣ ಘಟಕಗಳಲ್ಲಿ ಶುದ್ಧಿಕರಿಸಿ, ಶುದ್ಧಿಕರಿಸಿದ ನೀರನ್ನು ತೋಟಗಾರಿಕೆ ಹಾಗೂ ವ್ಯವಸಾಯಕ್ಕೆ ಬಳಸಬೇಕಾಗಿರುತ್ತದೆ.<br>ಆ) ಸಣ್ಣ ಕೈಗಾರಿಕೆಗಳು ತಮ್ಮ ಕಾರ್ಯಚಟುವಟಿಕೆಗಳಿಂದ ಉತ್ಪತ್ತಿಯಾಗುವ ತ್ಯಾಜ್ಯ ನೀರನ್ನು ಮಂಡಳಿಯಿಂದ ಸಮ್ಮತಿ ಪಡೆದು ಕಾರ್ಯನಿರ್ವಹಿಸುತ್ತಿರುವ ಸಾಮೂಹಿಕ ಶುದ್ಧಿಕರಣ ಘಟಕಗಳಿಗೆ ನೀಡಬೇಕಾಗಿರುತ್ತದೆ.<br><br>ಇ) ಅಪಾಯಕಾರಿ ತ್ಯಾಜ್ಯಗಳನ್ನು ಮಂಡಳಿಯಿಂದ ಅಧಿಕಾರ ಪತ್ರ ಪಡೆದ ತ್ಯಾಜ್ಯ ಸಂಸ್ಕರಣಾ ಘಟಕಗಳಿಗೆ ನೀಡಬೇಕಾಗಿರುತ್ತದೆ.<br>ಈ) ಕೈಗಾರಿಕೆಗಳಿಂದ ಉತ್ಪತ್ತಿಯಾದ ಇತರ ಘನತ್ಯಾಜ್ಯವನ್ನು ವೈಜ್ಞಾನಿಕವಾಗಿ ವಿಲೇವಾರಿ ಮಾಡಬೇಕಿರುತ್ತದೆ. |
| ಆ) | ಶಿವಮೊಗ್ಗ ಜಿಲ್ಲೆಯಲ್ಲಿನ ಹಲವಾರು ಕೈಗಾರಿಕೆಗಳು ಸರ್ಕಾರದ ಮಾನದಂಡಗಳನ್ನು ಪಾಲಿಸದೆ ಅಪಾಯಕಾರಿ ತ್ಯಾಜ್ಯಗಳನ್ನು ನೇರವಾಗಿ ಕೆರೆ/ನದಿಗಳಿಗೆ ಬಿಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಸರ್ಕಾರದ ಗಮನಕ್ಕೆ ಬಂದಿರುತ್ತದೆ. |

| | | |
|---|---|---|
| ಇ) | ಬಂದಿದ್ದಲ್ಲಿ, ಯಾವ ಯಾವ ಕೈಗಾರಿಕೆಗಳ ಮೇಲೆ ಕ್ರಮ ಕೈಗೊಳ್ಳಲಾಗಿದೆ: (ವಿವರ ನೀಡುವುದು) | ಅ) ಶಿವಮೊಗ್ಗ ನಗರದ ಮೆ. ಶಾಹೀ ಎಕ್ಸ್‌ಪೋರ್ಟ್ ಪ್ರೈ ಲೀ. ಕೈಗಾರಿಕಾ ಪ್ರದೇಶ, ನಿದಿಗೆ, ಶಿವಮೊಗ್ಗ-ಜಿಲ್ಲೆ.. (K.P.D - KNITTING Processing division ಹಾಗೂ W.P.D- Woven processing unit) ಘಟಕಗಳಿಗೆ ತ್ಯಾಜ್ಯ ಶುದ್ಧೀಕರಣ ಘಟಕದಿಂದ ಸೋರಿಕೆಯಾದ ನೀರು ಜೆಣ್ಣೆಕೆರೆಗೆ ಸೇರುವುದಾಗಿ ದೂರು ದಾಖಲಾಗಿರುತ್ತದೆ.<br>ಆ) ಮೆ. ಶಾಹೀ ಎಕ್ಸ್‌ಪೋರ್ಟ್ ಪ್ರೈ ಲೀ. ಕೈಗಾರಿಕಾ ಪ್ರದೇಶ, ನಿದಿಗೆ, ಶಿವಮೊಗ್ಗ-ಜಿಲ್ಲೆ., (K.P.D ಹಾಗೂ W.P.D) ಇವರಿಗೆ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ಉದ್ದೇಶಿತ ಮುಚ್ಚುವ ಆದೇಶವನ್ನು ದಿನಾಂಕ.09-08-2023 ರಂದು ನೀಡಲಾಗಿದೆ.<br><br>ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ಸದರಿ ಕೈಗಾರಿಕೆಗೆ ಮೌಖಿಕ ವಿಚಾರಣೆಯನ್ನು ಬೆಂಗಳೂರಿನ ಕೇಂದ್ರ ಕಛೇರಿಯಲ್ಲಿ ದಿನಾಂಕ.04-10-2023ರಂದು ನಡೆಸಿ ಹಲವು ನಿರ್ದೇಶನಗಳನ್ನು ನೀಡಿರುವ ಹಿನ್ನೆಲೆಯಲ್ಲಿ ಈ ಕೆಳಗಿನ ಕ್ರಮಗಳನ್ನು ತೆಗೆದುಕೊಂಡಿರುತ್ತಾರೆ.<br>• KPD ಘಟಕದ ETP ಪಕ್ಕದಲ್ಲಿರುವ ಕೆರೆಯ ನೀರನ್ನು ಸಂಪೂರ್ಣವಾಗಿ ತೆಗೆಯಲಾಗಿರುತ್ತದೆ ಹಾಗೂ ಅದರ Sludgeನ್ನು TSDF-Treatment, Storage and disposal facility ಮುಖಾಂತರ ವಿಲೇವಾರಿ ಮಾಡಲಾಗಿರುತ್ತದೆ.<br>• ಮತ್ತೊಂದು ಕೆರೆ (ಜೆಣ್ಣೆ ಕೆರೆ) ನೀರಿನ ಗುಣಮಟ್ಟ ಕಾಪಾಡುವ ನಿಟ್ಟಿನಲ್ಲಿ ಕೈಗಾರಿಕೆಯವರು ETPಯಿಂದ ಶುದ್ಧಿಕರಿಸಿದ ನೀರನ್ನು ಪುನ: RO Plant ಅಳವಡಿಸಿ ಅದರಲ್ಲಿ ಶುದ್ಧಿಕರಿಸುತ್ತಿರುತ್ತಾರೆ.<br><br>ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಪ್ರಾದೇಶಿಕ ಕಛೇರಿಯ ಅಧಿಕಾರಿಗಳು ದಿನಾಂಕ:18.10.2024ರಂದು ಸದರಿ ಕೈಗಾರಿಕೆಯ ಪರಿವೀಕ್ಷಣೆಯನ್ನು ನಡೆಸಿದ್ದು ಯಾವುದೇ ರೀತಿಯ ತ್ಯಾಜ್ಯನೀರು ಹೊರಗಡೆ ಬಿಡುತ್ತಿರುವುದು ಕಂಡುಬಂದಿರುವುದಿಲ್ಲ ಎಂದು ವರದಿ ಸಲ್ಲಿಸಿರುತ್ತಾರೆ. |

| | | |
|---|---|---|
| ಈ) | ಕೈಗಾರಿಕೆಗಳು ತ್ಯಾಜ್ಯ ವಿಲೇವಾರಿಗೆ ಅಗತ್ಯ ವ್ಯವಸ್ಥೆಯನ್ನು ಕೈಗೊಂಡಿರುವುದನ್ನು ಖಚಿತಪಡಿಸಿಕೊಳ್ಳಲು ಮತ್ತು ಅಪಾಯಕಾರಿ ತ್ಯಾಜ್ಯಗಳನ್ನು ನೇರವಾಗಿ ಕರೆ/ನದಿ ಮೂಲಗಳಿಗೆ ಬಿಡುವುದನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕಠಿಣ ಕ್ರಮಗಳೇನು? | ಕೈಗಾರಿಕೆಗಳ ತ್ಯಾಜ್ಯ ವಿಲೇವಾರಿಗೆ ಅಗತ್ಯ ವ್ಯವಸ್ಥೆಯನ್ನು ಕಾಲ ಕಾಲಕ್ಕೆ ಪ್ರಾದೇಶಿಕ ಕಛೇರಿಯ ಅಧಿಕಾರಿಗಳು ಪರಿವೀಕ್ಷಿಸಿ. ನ್ಯೂನತೆಗಳು ಕಂಡು ಬಂದಲ್ಲಿ ಕಾಯಿದೆಗಳ ಮಾನದಂಡ ಅನುಸರಿಸಿ ಸಕ್ಷನ್ 33 (A) ಜಲ ಕಾಯ್ದೆ 1974 ಮತ್ತು ಸಕ್ಷನ್ 31 (A) ವಾಯು ಕಾಯ್ದೆ 1981 ಅಡಿಯಲ್ಲಿ ಮುಚ್ಚುವ ಆದೇಶ ನೀಡಲಾಗುವುದು. |

ಸಂಖ್ಯೆ: ಅಪಜೀ 211 ಇಎನ್‌ಜಿ 2024

(ಈಶ್ವರ ಬಿ. ಖಂಡ್ರೆ)
ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಸಚಿವರು